**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:18-03-2021.

**ಆದೇಶ**

1. ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:16.03.2021ರಲ್ಲಿ ಶ್ರೀ ತುಷಾರ್ ಗಿರಿನಾಥ್, ಭಾ.ಆ.ಸೇ., ಸರ್ಕಾರದ ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು. ಇವರನ್ನು ಆಪ್ತಮಿತ್ರ ಸಹಾಯವಾಣಿಯಲ್ಲಿನ ತಂತ್ರಾಂಶವನ್ನು (14410) NASCOM/ INFOSYS ಇವರಿಂದ ಪಡೆದು ರಾಜ್ಯ ದತ್ತಾಂಶ ಕೇಂದ್ರದಲ್ಲಿ ಅಳವಡಿಸಲು ನೋಡಲ್ ಅಧಿಕಾರಿಯಾಗಿ ಹಾಗೂ ಶ್ರೀಮತಿ ಮೀನಾಕ್ಷಿ ನೇಗಿ ಭಾ.ಅ.ಸೇ., ಹೆಚ್ಚುವರಿ ಪ್ರಧಾನ ಅರಣ್ಯ ಸಂರಕ್ಷಣಾಧಿಕಾರಿ (CAMPA), ಬೆಂಗಳೂರು. ಇವರನ್ನು ತಂಡದ ಸದಸ್ಯರನ್ನಾಗಿ ನೇಮಿಸಲಾಗಿರುತ್ತದೆ.

2. ಪ್ರಸ್ತುತ, ಈ ತಂಡಕ್ಕೆ ಹೆಚ್ಚುವರಿಯಾಗಿ ಆಪ್ತಮಿತ್ರ ಸಹಾಯವಾಣಿ ತಂತ್ರಾಂಶ ಅಳವಡಿಕೆಗೆ ಸಹಕರಿಸಲು ಶ್ರೀ ಬಿಸ್ವಜಿತ್ ಮಿಶ್ರ ಭಾ.ಅ.ಸೇ., ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (IT), ಅರಣ್ಯ ಭವನ, ಬೆಂಗಳೂರು. ಇವರನ್ನು ತಂಡದ ಸದಸ್ಯರನ್ನಾಗಿ ನೇಮಿಸಲಾಗಿದೆ.

3. ಆಪ್ತಮಿತ್ರ ಸಹಾಯವಾಣಿ ತಂಡದ ನೋಡಲ್ ಅಧಿಕಾರಿಯು ಕಾರ್ಯನಿಮಿತ್ತ ರಾಜ್ಯ ಸರ್ಕಾರದ ಯಾವುದೇ ಅಧಿಕಾರಿಯನ್ನು ಸಮನ್ವಯಕ್ಕಾಗಿ ನೇಮಿಸಿಕೊಳ್ಳಲು ಅಧಿಕಾರ ನೀಡಿದೆ.

4. ಈ ಆದೇಶವನ್ನು ವಿಪತ್ತು ನಿರ್ವಹಣೆ ಕಾಯ್ದೆ-2005ರ ಸೆಕ್ಷನ್ 24 (ಇ), (ಎಫ್) ಮತ್ತು (ಎಲ್) ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಹೊರಡಿಸಲಾಗಿದೆ.

**(ಅಂಜುಂ ಪರ್ವೇಜ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ
ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.